I/428819/2023

ಕರ್ನಾಟಕ ಸರ್ಕಾರ

ಸಂಖ್ಯೆ: SWD/EDU/ED6/48/2023/1009904

ಆಯುಕ್ತರ ಕಛೇರಿ, ಸಮಾಜ ಕಲ್ಯಾಣ ಇಲಾಖೆ,
ಬಹುಮಹಡಿ ಕಟ್ಟಡ, 5ನೇ ಮಹಡಿ,
ಡಾ. ಬಿ ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು
ದಿನಾಂಕ: 17.05.2023

# ಸುತ್ತೋಲೆ

ವಿಷಯ: ಸಮಾಜ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವಿದ್ಯಾರ್ಥಿನಿಲಯಗಳಲ್ಲಿ ಅನಧಿಕೃತ ವ್ಯಕ್ತಿಗಳ ಪ್ರವೇಶವನ್ನು ನಿರ್ಭಂಧಿಸುವ ಸಂಬಂಧ ನಿಯಮಿತವಾಗಿ ನಿಲಯಗಳ ತಪಾಸಣೆ ಮಾಡುವ ಬಗ್ಗೆ

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: SWD/EDU/ED6/48/2023/(E-1009904), ದಿನಾಂಕ: 28.03.2023

ಸಮಾಜ ಕಲ್ಯಾಣ ಇಲಾಖೆಯ ಅಡಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವಿದ್ಯಾರ್ಥಿನಿಲಯಗಳಲ್ಲಿ ಅದರಲ್ಲೂ ಬಹುಮುಖ್ಯವಾಗಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಅನಧಿಕೃತ ವ್ಯಕ್ತಿಗಳು ನಿಲಯದಲ್ಲಿ ವಾಸ್ತವ್ಯ ಹೂಡಿ ನೈಜ ನಿಲಯಾರ್ಥಿಗಳ ವಿದ್ಯಾಭ್ಯಾಸ ಹಾಗೂ ವಾಸ್ತವ್ಯಕ್ಕೆ ಧಕ್ಕೆ ತರುತ್ತಿರುವ ಬಗ್ಗೆ ದೂರುಗಳು ಸ್ವೀಕೃತವಾದ ಹಿನ್ನಲೆಯಲ್ಲಿ ಸದರಿ ಅನಧಿಕೃತ ವ್ಯಕ್ತಿಗಳ ಪ್ರವೇಶವನ್ನು ನಿರ್ಭಂಧಿಸಲು ಹಾಗೂ ಅಂತಹ ಅನಧಿಕೃತ ವ್ಯಕ್ತಿಗಳನ್ನು ನಿಲಯಕ್ಕೆ ಕರೆತರುತ್ತಿರುವವರ ವಿರುದ್ಧ ಕ್ರಮ ತೆಗೆದುಕೊಳ್ಳುವ ನಿಟ್ಟಿನಲ್ಲಿ ಉಲ್ಲೇಖದ ರೀತ್ಯಾ ಸರ್ಕಾರದ ಆದೇಶವನ್ನು ಹೊರಡಿಸಲಾಗಿರುತ್ತದೆ.

ಅದರಂತೆ, ಉಲ್ಲೇಖಿತ ಸರ್ಕಾರಿ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ಸಂಬಂಧ ಇಲಾಖೆಯ ಎಲ್ಲಾ ಜಿಲ್ಲಾ ಮಟ್ಟದ ಜಂಟಿ / ಉಪನಿರ್ದೇಶಕರು ಈ ಕೂಡಲೇ ಜಾರಿಗೆ ಬರುವಂತೆ ತಪಾಸಣಾ ತಂಡ ರಚಿಸಿ, ಅನಿರೀಕ್ಷಿತವಾಗಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಭೇಟಿ ನೀಡಿ, ನಿಲಯಗಳಲ್ಲಿ ಅನಧಿಕೃತ ವ್ಯಕ್ತಿಗಳು ವಾಸ್ತವ್ಯ ಹೂಡಿರುವ ಬಗ್ಗೆ ತಪಾಸಣೆ ಮಾಡಿ ಈ ಕಛೇರಿಗೆ ವರದಿಯನ್ನು ಸಲ್ಲಿಸಲು ಸೂಚಿಸಿದೆ. ಮುಂದುವರೆದು, ತಪಾಸಣೆ ಮಾಡುವ ಸಮಯದಲ್ಲಿ ಈ ಕೆಳಕಂಡ ಸೂಚನೆಗಳನ್ನು ಗಮನದಲ್ಲಿಟ್ಟುಕೊಳ್ಳತಕ್ಕದ್ದು:

1. ಪ್ರತಿ ಮಾಹೆ ಅನಿರೀಕ್ಷಿತವಾಗಿ ತಪಾಸಣೆಯನ್ನು ಜಿಲ್ಲಾ ಮಟ್ಟದ ಅಧಿಕಾರಿಗಳೇ ಕೈಗೊಳ್ಳತಕ್ಕದ್ದು ಹಾಗೂ ಈ ಸಂಬಂದ ತಪಾಸಣೆ ಅಧಿಕಾರವನ್ನು ತನ್ನ ಅಧೀನ ಸಿಬ್ಬಂದಿಗೆ ಪ್ರತ್ಯಾಯೋಜಿಸತಕ್ಕದ್ದಲ್ಲ.
2. ಬಾಲಕಿಯರ ವಿದ್ಯಾರ್ಥಿನಿಲಯಗಳ ತಪಾಸಣೆಗೆ ತೆರಳುವಾಗ ರಾತ್ರಿ 07:00 ಗಂಟೆಯ ನಂತರ (ಅನಿವಾರ್ಯ ಸಂದರ್ಭಗಳನ್ನು ಹೊರತುಪಡಿಸಿ) ತಪಾಸಣೆಗೆ ತೆರಳತಕ್ಕದ್ದಲ್ಲ ಹಾಗೂ ಸದರಿ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಕಡ್ಡಾಯವಾಗಿ ಮಹಿಳಾ ವಾರ್ಡನ್ / ಸಿಬ್ಬಂದಿ ಸಮಕ್ಷಮ ತಪಾಸಣೆ ಮಾಡುವುದು.
3. ತಪಾಸಣೆ ಮಾಡುವ ಸಮಯದಲ್ಲಿ State Hostel Portal ಮೂಲಕ ಪ್ರವೇಶ ಪಡೆದ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ಮಾತ್ರ ಸಕ್ರಮವೆಂದು ಪರಿಗಣಿಸಿ, ಇತರೆ ವಿದ್ಯಾರ್ಥಿಗಳನ್ನು ಅನಧಿಕೃತ ಎಂದು ಪರಿಗಣಿಸುವುದು.
4. ಸದರಿ ದಾಖಲಾದ ಎಲ್ಲಾ ವಿದ್ಯಾರ್ಥಿಗಳಿಗೆ ಕೊಠಡಿ ಹಂಚಿಕೆಯಾಗಿರುವ ಬಗ್ಗೆ ಹಾಗೂ ನಿಲಯದ ಗುರುತಿನ ಚೀಟಿಯನ್ನು ವಿತರಣೆ ಮಾಡಿರುವ ಬಗ್ಗೆ ಖಾತ್ರಿ ಮಾಡಿಕೊಳ್ಳುವುದು.

5. ದಾಖಲಾದ ಎಲ್ಲಾ ವಿದ್ಯಾರ್ಥಿಗಳು ಉಲ್ಲೇಖಿತ ಸರ್ಕಾರಿ ಆದೇಶದಲ್ಲಿ ಸೂಚಿಸಿದಂತೆ ಪ್ರಮಾಣ ಪತ್ರ ಸಲ್ಲಿಸಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು.
6. ನಿಲಯಕ್ಕೆ ದಾಖಲಾದ ಎಲ್ಲ ವಿದ್ಯಾರ್ಥಿಗಳು Biomatric ಹಾಜರಾತಿಯನ್ನು ನಮೂದು ಮಾಡುತ್ತಿರುವ ಬಗ್ಗೆ ಖಾತ್ರಿ ಮಾಡಿಕೊಳ್ಳತಕ್ಕದ್ದು.
7. ನಿಲಯದ ಎಲ್ಲಾ ವಿದ್ಯಾರ್ಥಿಗಳು ಡೈನಿಂಗ್ ಹಾಲಿನಲ್ಲಿ ಅಥವಾ ಊಟಕ್ಕೆ ಮೀಸಲಿರಿಸಿದ ಕೋಣೆಯಲ್ಲಿಯೇ ಊಟವನ್ನು ಮಾಡುತ್ತಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು.

ಸದರಿ ಎಲ್ಲಾ ಅಂಶಗಳ ಬಗ್ಗೆ ನಿಯಮಿತವಾಗಿ ತಪಾಸಣೆ ಮಾಡಿ, ಆಗಿಂದಾಗ್ಗೆ ವರದಿಯನ್ನು ಈ ಕಛೇರಿಗೆ ಸಲ್ಲಿಸುವುದು.

Signed by K Rakesh Kumar
Date: 19-05-2023 15:15:31
**ಆಯುಕ್ತರು**
**ಸಮಾಜ ಕಲಾಣ ಇಲಾಖೆ**
**ಬೆಂಗಳೂರು**

ಇವರಿಗೆ,

ಎಲ್ಲಾ ಜಿಲ್ಲೆಗಳ ಜಂಟಿ / ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
2. ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲೆಗಳು ರವರಿಗೆ ಮಾಹಿತಿಗಾಗಿ
3. ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಎಲ್ಲಾ ಜಿಲ್ಲೆಗಳು
4. ಎಲ್ಲಾ ಜಿಲ್ಲೆಗಳ ನೋಡಲ್ ಅಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ
5. ಕಛೇರಿ ಪ್ರತಿ / ಇತರೆ